## 10ನೇ ಕಾಮನ್ವೆಲ್ತ್ ಸಂಸದೀಯ ಸಂಘ ಸಮ್ಮೇಳನದಲ್ಲಿ ಬಸವರಾಜ ಹೊರಟ್ಟಿ ಮತ್ತು ಯು.ಟಿ.ಖಾದರ್ ಭಾಗಿ

# ಶಾಸನಸಭೆಗಳಿಗೆ ಆರ್ಥಿಕ ಸ್ವಾಯತ್ತತೆ ನೀಡಿಕೆ- ಕನಿಷ್ಠ 60 ದಿನಗಳ ಅಧಿವೇಶನ ಕಡ್ಡಾಯಕ್ಕೆ ಸಭಾಪತಿ ಹೊರಟ್ಟಿ ಆಗ್ರಹ

### ಬಸವರಾಜ ಹೊರಟ್ಟಿ ಬಾಷಣ

**ನವದೆಹಲಿ ಸೆ.23:** ಶಾಸನ ಸಭೆಗಳ ಸ್ವತಂತ್ರ ನಿರ್ವಹಣೆ ಹಾಗೂ ಪಕ್ಷಾತೀತ ಕಾರ್ಯನಿರ್ವಹಣೆ ದೃಷ್ಟಿಯಿಂದ ಅವುಗಳಿಗೆ ಆರ್ಥಿಕ ಸ್ವಾಯತ್ತತೆ ನೀಡುವುದು ಅಗತ್ಯವಾಗಿದ್ದು, ಆ ನಿಟ್ಟಿನಲ್ಲಿ ಸೂಕ್ತ ಕಾನೂನಗಳಡಿ ಕಟ್ಟುನಿಟ್ಟಿನ ಕ್ರಮ ಅವಶ್ಯಕವಾಗಿದೆಂದು ಕರ್ನಾಟಕ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಹೊರಟ್ಟಿ ಮನವಿ ಮಾಡಿದರು.

ಶಾಸನ ಸಭೆಗಳ ಸಚಿವಾಲಯಕ್ಕೆ ಆರ್ಥಿಕ ಸ್ವಾಯತ್ತತೆ ಮತ್ತು ಸ್ವಾಯತ್ತ ಸ್ಥಾನ-ಮಾನ ನೀಡುವ ಕುರಿತು ಕಾನೂನು ಮೂಲಕ ಸೂಕ್ತ ನಿರ್ಧಾರ ಕೈಗೊಂಡು ಸದನಗಳ ಗೌರವ, ಘನತೆ ಹಾಗೂ ಪ್ರಾಮುಖ್ಯತೆ ಹೆಚ್ಚಿಸಬೇಕು. ಈ ನಿಟ್ಟಿನಲ್ಲಿ ಲೋಕ ಸಭಾಧ್ಯಕ್ಷರು ಕ್ರಮ ಕೈಗೊಳ್ಳುವಂತೆ ಬಸವರಾಜ ಹೊರಟ್ಟಿ ಮನವಿ ಮಾಡಿದರು. ಪ್ರತಿಯೊಂದು ಆರ್ಥಿಕ ಸಂಪನ್ಮೂಲಕ್ಕೂ ಸರಕಾರಗಳನ್ನು ಹಾಗೂ ಆರ್ಥಿಕ ಇಲಾಖೆ ಅಧಿಕಾರಿಗಳ ಮೊರೆ ಹೋಗುವುದು ಸೂಕ್ತವಾದುದಲ್ಲ, ಹಾಗೂ ಈ ಪ್ರಕ್ರಿಯೆಯಿಂದ ಆರ್ಥಿಕ ಅನುದಾನ ಪಡೆಯಲು ಅತಿಹೆಚ್ಚಿನ ಸಮಯ ಹಾಗೂ ಶ್ರಮದ ಅವಶ್ಯಕತೆಯಿದ್ದು ಅಲ್ಲದೇ ಇದರಿಂದ ಶಾಸನ ಸಭೆಗಳ ಸ್ವಾಯತ್ತತೆಗೆ ಅಡ್ಡಿ ಉಂಟಾಗುತ್ತಿದೆ ಎಂದು ವಿವರಿಸಿದರು. ಶಾಸನಸಭೆ ಅಧಿವೇಶನಗಳ ಕುರಿತು ಪ್ರಸ್ತಾಪಿಸಿದ ಬಸವರಾಜ ಹೊರಟ್ಟಿ, ವಾರ್ಷಿಕವಾಗಿ ಕನಿಷ್ಠ 60 ದಿನಗಳ ಕಾಲ ಅಧಿವೇಶನ ನಡೆಸುವುದನ್ನು ಕಡ್ಡಾಯಗೊಳಿಸಬೇಕು. ಶಾಸನಸಭೆಗಳು ಜನಸಾಮಾನ್ಯರ ದೈನಂದಿನ ಬದುಕಿನ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸುವ ಸೂಕ್ತವೇದಿಕೆಯಾಗಿವೆ ಆದ್ದರಿಂದ ಪ್ರತಿವರ್ಷವೂ ಶಾಸನಸಭೆಗಳು ಕನಿಷ್ಠ 60 ದಿನಗಳ ಕಾಲ ಅಧಿವೇಶನ ನಡೆಸಿ ಪ್ರಜಾಪ್ರಭುತ್ವದ ಸಾರ್ಥಕತೆಗೆ ಮುಂದಾಗುವಲ್ಲಿ ಲೋಕಸಭೆ ಹಾಗೂ ರಾಜ್ಯಸಭೆಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು. ಲೋಕ ಸಭಾಧ್ಯಕ್ಷ ಓಂ ಬಿರ್ಲಾ, ರಾಜ್ಯಸಭೆಯ ಉಪಸಭಾಪತಿ ಹರಿವಂಶ್ ನಾರಾಯಣ ಸಿಂಗ್, ಕರ್ನಾಟಕ ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್, ಕರ್ನಾಟಕದ ಉಭಯ ಸದನದ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮೀ, ವಿಶಾಲಾಕ್ಷಿ, ಸೇರಿದಂತೆ, ವಿವಿಧ ರಾಜ್ಯಗಳ ವಿಧಾನ ಸಭಾಧ್ಯಕ್ಷರು ಹಾಗೂ ಸಭಾಪತಿಗಳು ಸಮ್ಮೇಳನದಲ್ಲಿ ಪಾಲ್ಗೊಂಡಿದ್ದಾರೆ..



### ಯು.ಟಿ.ಖಾದರ್ ಭಾಷಣ

ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ 10ನೇ ಕಾಮನ್ವೆಲ್ತ್ ಸಂಸದೀಯ ಸಂಘ ಭಾರತ ವಲಯದ ಸಮ್ಮೇಳನ ದಲ್ಲಿ ಭಾಗವಹಿಸಿ the role of legislative bodies in the attainment of sustainable and inclusive development ಎಂಬ ವಿಷಯದ ಬಗ್ಗೆ ತಮ್ಮ ನಿಲುವನ್ನು ಮಂಡಿಸಿದರು. ಇತ್ತೀಚಿನ ಜಾಗತಿಕ ಅಂಕಿಅಂಶಗಳ ಪ್ರಕಾರ, ಭಾರತವು ಸುಮಾರು 356 ಮಿಲಿಯನ್ ಯುವಕರನ್ನು ಹೊಂದಿದ್ದು, ದೇಶವನ್ನು "ಯಂಗ್ ಇಂಡಿಯಾ" ಎಂದು ಕರೆಯಲಾಗುತ್ತಿದೆ. ಸಮಸ್ಯೆ ಆಧಾರಿತ ಚರ್ಚೆ ಮತ್ತು ವಾದಗಳು ಮಂಡನೆಯಾಗಬೇಕು. ಸಂಸತ್ತು ಮತ್ತು ರಾಜ್ಯಗಳಲ್ಲಿರುವ ವಿಧಾನಸಭೆ ಹಾಗೂ ವಿಧಾನ ಪರಿಷತ್‌ನ ಕಾರ್ಯ ಚಟುವಟಿಕೆಗಳ ಬಗ್ಗೆ ಯುವಜನರು ಅರ್ಥಮಾಡಿಕೊಳ್ಳುವುದು ಅತ್ಯಗತ್ಯವಾಗಿದ್ದು, ಇಂಡಿಯನ್ ಯುವ ಸಂಸತ್ ಇವುಗಳನ್ನು ಅರಿಯುವ ಉತ್ತಮ ಮತ್ತು ಮಾದರಿ ವೇದಿಕೆಯಾಗಬೇಕು ಎಂದು ಖಾದರ್ ಪ್ರತಿಪಾದಿಸಿದರು.



10ನೇ ಕಾಮನ್ವೆಲ್ತ್ ಸಂಸದೀಯ ಸಂಘ ಸಮ್ಮೇಳನದಲ್ಲಿ ಭಾಗವಹಿಸಿದ್ದ ಸದಸ್ಯರ ಸಮೂಹ ಛಾಯಾಚಿತ್ರ